# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 12.06.2023ರಂದು ಪೂರ್ವಾಹ್ನ ಗಂಟೆ 11.30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿಯ 2023-24ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು:**

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿದರು.

➢ **ಸ್ವಾಗತ**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 16(2)ರನ್ವಯ ಘನತೆವೆತ್ತ ರಾಜ್ಯಪಾಲರ ಕಚೇರಿ ಪತ್ರ ಸಂಖ್ಯೆ:GS 02 MLM 2023 ದಿನಾಂಕ 31.05.2023ರಲ್ಲಿ ದಿನಾಂಕ 02.06.2023ರ ಅಪರಾಹ್ನದಿಂದ ಅನ್ವಯವಾಗುವಂತೆ ಪ್ರೊ.ಜಯರಾಜ್ ಅಮೀನ್, ಡೀನರು, ಕಲಾ ನಿಕಾಯ ಇವರನ್ನು ಮಂಗಳೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಯವರನ್ನಾಗಿ ನೇಮಕ ಮಾಡಲಾಗಿರುತ್ತದೆ. ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(ii) ರ ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗಲು ಆಗಮಿಸಿರುವ ಡಾ.ವಿಷ್ಣುಮೂರ್ತಿ ಕೆ.ಎ., ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿ, ಮಂಗಳೂರು ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

➢ **ಕೃತಜ್ಞತೆ**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 16(2)ರನ್ವಯ ಘನತೆವೆತ್ತ ರಾಜ್ಯಪಾಲರ ಕಚೇರಿ ಪತ್ರ ಸಂಖ್ಯೆ: GS 02 MLM 2023 ದಿನಾಂಕ 31.05.2023ರಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿ ಅಧಿಕಾರ ವಹಿಸಿಕೊಂಡಿದ್ದ ಪ್ರೊ.ಪಿ.ಸುಬ್ರಹ್ಮಣ್ಯ ಯಡಪಡಿತ್ತಾಯ ಇವರ ಅಧಿಕಾರವಧಿಯು ದಿನಾಂಕ 02.06.2023ರಂದು ಕೊನೆಗೊಂಡಿರುವ ವಿಚಾರವನ್ನು ಮಾನ್ಯ ಕುಲಸಚಿವರು ಸಭೆಗೆ ತಿಳಿಸಿದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ **30(1) (iV)**ರ ಪ್ರಕಾರ ವಿಧಾನಸಭಾ ಸದಸ್ಯರ ನೆಲೆಯಲ್ಲಿ ಕರ್ನಾಟಕ ಸರಕಾರದ ಪತ್ರದಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ ಈ ಕೆಳಗಿನ ವಿಧಾನ ಸಭಾ ಸದಸ್ಯರುಗಳನ್ನು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

1. ಶ್ರೀ ರಾಜೇಶ್ ನಾಯ್ಕ್ ಯು., ಮಾನ್ಯ ವಿಧಾನಸಭಾ ಸದಸ್ಯರು, ನಂ.2-166/3, ಒಡ್ಡೂರು ಫಾರ್ಮ್ಸ್, ಗಂಜೀಮಠ ಅಂಚೆ, ತೆಂಕ ಎಡಪಡವು ಗ್ರಾಮ, ಮಂಗಳೂರು ತಾಲ್ಲೂಕು, ದಕ್ಷಿಣ ಕನ್ನಡ - 574144 .
2. ಶ್ರೀ ಕೆ. ರಘುಪತಿ ಭಟ್, ಮಾನ್ಯ ವಿಧಾನಸಭಾ ಸದಸ್ಯರು, ನಂ. 8.32, ಗುರುಪ್ರಸಾದ್, ರಾಜಾಚಾರ್ಯ ಮಾರ್ಗ, ಕರುಬಳ್ಳಿ, ಕುಂಜಿಬೆಟ್ಟು ಪೋಸ್ಟ್, ಉಡುಪಿ-576102.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(V)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ವಿಧಾನಪರಿಷತ್ ಸದಸ್ಯರ ನೆಲೆಯಲ್ಲಿ ನಾಮನಿರ್ದೇಶನಗೊಂಡಿದ್ದ ಈ ಕೆಳಗಿನ ಸದಸ್ಯರುಗಳನ್ನು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

1. ಶ್ರೀ ಕೆ ಹರೀಶ್ ಕುಮಾರ್, ವಿಧಾನ ಪರಿಷತ್ತಿನ ಸದಸ್ಯರು, ನಂ. 205, ಬಿ-ಬ್ಲಾಕ್, ಮೌರಿಷ್ ಪ್ಯಾಲೆಶ್, ವ್ಯಾಸರಾವ್ ರೋಡ್, ಕದ್ರಿ ಕಂಬಳ ಪೋಸ್ಟ್ ಕೊಡಿಯಾಲ ಬೈಲ್, ಮಂಗಳೂರು.
2. ಶ್ರೀ. ಬಿ.ಎಂ ಫಾರೂಕ್, ವಿಧಾನ ಪರಿಷತ್ತಿನ ಸದಸ್ಯರು, ನಂ. 8-112(1) ಕಾಟಿಪಳ್ಳ, 8ನೇ ಬ್ಲಾಕ್, ಮಂಗಳೂರು.

III. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(xi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರಾಗಿ ಸರ್ಕಾರದಿಂದ ನಾಮನಿರ್ದೇಶನಗೊಂಡಿದ್ದ ಈ ಕೆಳಗಿನ ಸದಸ್ಯರುಗಳನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

1. ಡಾ. ಧನೇಶ್ ಕುಮಾರ್ ಕೆ.ಯು, ಪ್ರಾಂಶುಪಾಲರು, ನಿಟ್ಟೆ ಇನ್ಸ್ಟಿಟ್ಯೂಟ್ ಆಫ್ ಫಿಜಿಯೋಥೆರಪಿ & ಡೀಮ್ ವಿಶ್ವವಿದ್ಯಾನಿಲಯ, ದೇರಳಕಟ್ಟೆ, ಮಂಗಳೂರು.
2. ಶ್ರೀ ವಿಜಯಾನಂದ ಕೈಂತಜೆ, ನಂ.1/1, ಶ್ರೀರಾಮ ಭವನ, ಕುಳ್ಳಜೆ ಹೌಸ್, ಮಾಣಿ ಪೋಸ್ಟ್, ಬಂಟ್ವಾಳ ತಾಲೂಕು, ದಕ್ಷಿಣ ಕನ್ನಡ ಜಿಲ್ಲೆ.
3. ಶ್ರೀ ಟಿ. ಎ. ಕಿಶೋರ್ ಕುಮಾರ್, ಅರ್ವತೋಕ್ಲು ಗ್ರಾಮ & ಅಂಚೆ, ಮಡಿಕೇರಿ ತಾಲೂಕು.

4. ಶ್ರೀಮತಿ ಅಶ್ವಿನಿ. ವಿ, ನಂ.8, 2ನೇ ಮಹಡಿ, 9ನೇ ಮುಖ್ಯ ರಸ್ತೆ, ಪ್ಯಾಲೇಸ್ ಗುಟ್ಟಹಳ್ಳಿ, ಬೆಂಗಳೂರು -03
5. ಶ್ರೀ ಆನಂದ ಶ್ರೀಯಾನ್, ನಂ5-163 ಬಿ, ಕಾಪುಪಡು, ಕಾಪು ತಾಲ್ಲೂಕು, ಉಡುಪಿ ಜಿಲ್ಲೆ.
6. ಶ್ರೀಮತಿ ಜ್ಯೋತಿ ಸುನಿಲ್ ರಾಜ್, ಸುಧರ್ಮ ನಿಕೇತನ, ಮೂಕಾಂಬಿಕ ಐಸ್ ಪ್ಲಾಂಟ್ ಹತ್ತಿರ, ಹೊಯಿಗೆ ಬಜಾರ್, ಮಂಗಳೂರು- 1.
7. ಶ್ರೀ ಕರುಣಾಕರ್ ಜೈನ್, ಬಿನ್ ನಾಗರಾಜ ಜೈನ್, ಚೇತನಶ್ರೀ ನಾಗರಾಜ ನಿವಾಸ, ಕುತ್ಲೂರು ಗ್ರಾಮ & ಅಂಚೆ, ಬೆಳ್ತಂಗಡಿ ತಾಲ್ಲೂಕು, ಮಂಗಳೂರು.
8. ಶ್ರೀ ಡಿ.ಸಿ ರಾಮಚಂದ್ರ, ನಂ.83, ಬಸವಣ್ಣ ಟೆಂಪಲ್ ರೋಡ್, ದೊಡ್ಡಸೋಮನಹಳ್ಳಿ, ತಿಪ್ಪಸಂದ್ರ ಹೋಬಳಿ, ಮಾಗಡಿ ತಾಲೂಕು,ರಾಮನಗರ ಜಿಲ್ಲೆ
9. ಶ್ರೀ ಭಾರತಿ ಸಂಜಯಪ್ರಬು, 'ಸಮೃದ್ಧಿ' ಪ್ರಗತಿ ಕಾಲೋನಿ, ಬಾಳಿಗ stores ಹಿಂಭಾಗ, ಬಿಜೈ, ಮಂಗಳೂರು.

IV. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(ii)ರ ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗುತ್ತಿದ್ದ ಡಾ.ಗಿರಿಧರರಾವ್ ಎಂ.ಎಸ್. ಇವರನ್ನು ಆಯುಕ್ತರ ಪತ್ರದನ್ವಯ ಜಂಟಿ ನಿರ್ದೇಶಕರ ಕರ್ತವ್ಯದಿಂದ ಬಿಡುಗಡೆಗೊಳಿಸಿರುತ್ತಾರೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಸರ್ವರಿಗೂ ಕೃತಜ್ಞತಾಪೂರ್ವಕ ಅಭಿನಂದನೆಗನ್ನು ಸಲ್ಲಿಸಲಾಯಿತು.

**I. ನಡವಳಿಗಳ ದೃಢೀಕರಣ**

1. ದಿನಾಂಕ 22.05.2023ರಂದು ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿಯ 2023-24ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ದೃಢೀಕರಣ.

   **- ದೃಢೀಕರಿಸಲಾಯಿತು. –**

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ / ವಿನಿಯಮಗಳು**

**-ಯಾವುದೂ ಇರುವುದಿಲ್ಲ.-**

## III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:1(2023-24)

**ವಿಷಯ:** ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ, ವಿಸ್ತರಣಾ ಮತ್ತು ಹೊಸ ಶಾಶ್ವತ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಗಳ ವರದಿಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಆಯಾಯ ಕಾಲೇಜುಗಳಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಗಳೊಂದಿಗೆ ಸಲ್ಲಿಸಿದ ವರದಿಗಳನ್ನು ಅಂಗೀಕರಿಸಿ ಮುಂದುವರಿಕೆ, ವಿಸ್ತರಣಾ ಮತ್ತು ಹೊಸ ಶಾಶ್ವತ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:2(2023-24)

**ವಿಷಯ:** ಶೈ.ವ. 2023-24ನೇ ಸಾಲಿಗೆ ಹೊಸ/ವಿಸ್ತರಣಾ/ಮುಂದುವರಿಕೆ/ ಶಾಶ್ವತ ಸಂಯೋಜನೆ ಶಾಶ್ವತ ಸಂಯೋಜನೆಯ ಮುಂದುವರಿಕೆ ಸಂಯೋಜನೆ ಬಗ್ಗೆ ಕಾಲೇಜುಗಳ/ ವಿದ್ಯಾಸಂಸ್ಥೆಗಳ ಪರಿಶೀಲನೆಗೆ ಸ್ಥಳೀಯ ವಿಚಾರಣಾ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯನ್ನು ಹಿಂಪಡೆಯಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:3(2023-24)

**ವಿಷಯ:** ಇಂಡಸ್ ಕಾಲೇಜು ಪುತ್ತೂರು, ಎಂಬ ವಿದ್ಯಾಸಂಸ್ಥೆಯ ಹೆಸರು /ಆಡಳಿತ ಮಂಡಳಿ / ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಅಂಗೀಕರಿಸಿ ಪ್ರಸ್ತಾವನೆಯನ್ನು ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:4(2023-24)

**ವಿಷಯ:** ಸ್ವಸ್ತಿಕಾ ನ್ಯಾಷನಲ್ ಸ್ಕೂಲ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಹೆಸರನ್ನು ಸ್ವಸ್ತಿಕಾ ನ್ಯಾಷನಲ್ ಬಿಸಿನೆಸ್ ಸ್ಕೂಲ್ (Swastika National Business School) ಎಂದು ಬದಲಾಯಿಸುವ ಕುರಿತು.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಅಂಗೀಕರಿಸಿ ಪ್ರಸ್ತಾವನೆಯನ್ನು

ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:5 (2023-24)

**ವಿಷಯ:** ವಿಕಾಸ್ ಕಾಲೇಜು, ಮಂಗಳೂರು ಎಂಬ ವಿದ್ಯಾ ಸಂಸ್ಥೆಯ ಹೆಸರು ಮತ್ತು ಆಡಳಿತ ಮಂಡಳಿಯ ಬದಲಾವಣೆ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಅಂಗೀಕರಿಸಿ ಪ್ರಸ್ತಾವನೆಯನ್ನು ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:6(2023-24)

**ವಿಷಯ:** ಹಾರ್ವಡ್ ಇನ್ಸ್ಟಿಟ್ಯೂಟ್ ಆಫ್ ಫೈರ್ ಆಂಡ್ ಸೇಫ್ಟಿ ಇಂಜಿನಿಯರಿಂಗ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಅಂಗೀಕರಿಸಿ ಪ್ರಸ್ತಾವನೆಯನ್ನು ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:7(2023-24)

**ವಿಷಯ:** ಮಂಗಳೂರು ಇನ್ಸ್ಟಿಟ್ಯೂಟ್ ಆಫ್ ಫೈರ್ ಆಂಡ್ ಸೇಫ್ಟಿ ಇಂಜಿನಿಯರಿಂಗ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಯ ಹೆಸರು / ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಅಂಗೀಕರಿಸಿ ಪ್ರಸ್ತಾವನೆಯನ್ನು ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:8(2023-24)

**ವಿಷಯ:** ಶಿವಾಸ್ ಇಂಟರ್‌ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಪ್ರೊಫೆಷನಲ್ ಇನ್ನೋವೇಷನ್ಸ್, ದೇರಳಕಟ್ಟೆ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಹೊಸ ಸಂಯೋಜನೆ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಹೊಸ ಕಾಲೇಜಿಗೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:9(2023-24)

**ವಿಷಯ:** ವೈಭವ್ ಕಾಲೇಜು, ಎನ್.ಹೆಚ್.66, ದ್ವೀಪ ಬಿಲ್ಡಿಂಗ್, ಹಂಗಳೂರು, ಕುಂದಾಪುರ, ಉಡುಪಿ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ2023- 24ನೇ ಸಾಲಿಗೆ ಹೊಸ ಸಂಯೋಜನೆ ಮಂಜೂರಾತಿ ಬಗ್ಗೆ

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಯುಜಿಸಿ ವೃತ್ತಿ ಆಧಾರಿತ ಕಾರ್ಯಕ್ರಮಗಳಲ್ಲಿ ಈ ಕೆಳಗಿನ ತಿದ್ದುಪಡಿಗಳೊಂದಿಗೆ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಹೊಸ ಕಾಲೇಜಿಗೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

| ಯುಜಿಸಿ ವೃತ್ತಿ ಆಧಾರಿತ ಕಾರ್ಯಕ್ರಮ | ನಿಗದಿಪಡಿಸಿದ ವಿದ್ಯಾರ್ಥಿ ಪರಿಮಿತಿ |
|---|---|
| ಏವಿಯೇಶನ್ ಆಂಡ್ ಹಾಸ್ಪಿಟಾಲಿಟಿ ಮ್ಯಾನೇಜ್‌ಮೆಂಟ್ | 40 |
| ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಬಿಗ್ ಡಾಟಾ ಅನಾಲಿಟಿಕ್ಸ್ ಆಂಡ್ ಸೈಬರ್ ಸೆಕ್ಯೂರಿಟಿ | 60 |
| ಸಪ್ಲೈಚೈನ್ ಆಂಡ್ ಲಾಜಿಸ್ಟಿಕ್ ಮ್ಯಾನೇಜ್‌ಮೆಂಟ್ | 40 |

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:10 (2023-24)

**ವಿಷಯ:** ಶರಾಫ್ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಆಂಡ್ ಆರ್ಟ್ಸ್, ಮಂಜನಾಡಿ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಹೊಸ ಸಂಯೋಜನೆ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಹೊಸ ಕಾಲೇಜಿಗೆ

ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:11(2023-24)

**ವಿಷಯ:** ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಮತ್ತು ವಿಸ್ತರಣಾ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಗಳ ವರದಿಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಆಯಾಯ ಕಾಲೇಜುಗಳಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ಸಂಬಂಧಪಟ್ಟ ಪ್ರಾಧಿಕಾರಗಳ (RCI & AICTE) ಅನುಮೋದನೆ ಪಡೆದು ಮುಂದುವರಿಕೆ ಮತ್ತು ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

ಅಲ್ಲದೆ ಶ್ರೀಮತಿ ರುಕ್ಮಿಣಿ ಶೆಡ್ತಿ ಸ್ಮಾರಕ ನ್ಯಾಶನಲ್ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು ಈ ವಿದ್ಯಾಸಂಸ್ಥೆಗೆ ವಿಸ್ತರಣಾ ಸಂಯೋಜನೆಗೆ ಅರ್ಜಿ ಸಲ್ಲಿಸಿರುವ M.Sc. Physics ಕಾರ್ಯಕ್ರಮಕ್ಕೆ ಸಮಿತಿಯು 5 ವಿದ್ಯಾರ್ಥಿ ಪರಿಮಿತಿಯೊಂದಿಗೆ ವಿಸ್ತರಣಾ ಸಂಯೋಜನೆಗೆ ಶಿಫಾರಸ್ಸು ಮಾಡಿದ್ದು, ಕಾಲೇಜಿನಲ್ಲಿ ಲಭ್ಯವಿರುವ ಮೂಲಭೂತ ಸೌಕರ್ಯಗಳು ಮತ್ತು ಇತರೆ ಅಗತ್ಯ ಸೌಲಭ್ಯಗಳನ್ನು ಪರಿಶೀಲಿಸಿ ಸದರಿ ಕಾಲೇಜಿನ ಕೋರಿಕೆಯಂತೆ 10 ವಿದ್ಯಾರ್ಥಿ ಪರಿಮಿತಿಯೊಂದಿಗೆ ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಶೈಕ್ಷಣಿಕ ಮಂಡಳಿಯು ಶಿಫಾರಸ್ಸು ಮಾಡಿರುತ್ತದೆ.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಶೈ.ಮ.ವಿ.ಸ.2:12 (2023-24)

**ವಿಷಯ:** ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ** ಏಮ್ಸ್ ಪ್ರಥಮ ದರ್ಜೆ ಕಾಲೇಜು, ಕಡಬ, ಪುತ್ತೂರು ಈ ವಿದ್ಯಾಸಂಸ್ಥೆಯಲ್ಲಿ ಮೂಲಭೂತ ಸೌಕರ್ಯ ಕೊರತೆಯಿರುವ ಕಾರಣ ಸದರಿ ಕಾಲೇಜಿಗೆ ಮುಂದುವರಿಕೆ ಸಂಯೋಜನೆಗೆ ಸಮಿತಿಯು ಶಿಫಾರಸ್ಸು ಮಾಡಿರುವುದಿಲ್ಲ.

ಆದಾಗ್ಯೂ, ಕಟ್ಟಡ ಕಾಮಗಾರಿ ಪೂರ್ಣಗೊಂಡು ತರಗತಿ ನಡೆಸಲು ಯೋಗ್ಯವೆನಿಸಿದ ಬಗ್ಗೆ ಮತ್ತು ಇತರೆ ಅಗತ್ಯ ಸೌಲಭ್ಯಗಳ ಲಭ್ಯತೆ ಬಗ್ಗೆ ಕಾಲೇಜು ವರದಿ ನೀಡಿದಲ್ಲಿ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ತರಗತಿಗಳು ಪ್ರಾರಂಭವಾಗುವ ಮೊದಲು ಮರುಪರಿಶೀಲನಾ ಸಮಿತಿಯು ಕಾಲೇಜಿಗೆ ಭೇಟಿ ನೀಡಿ ಸಲ್ಲಿಸುವ ವರದಿಯ ಆಧಾರದ ಮೇರೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಶಿಫಾರಸ್ಸು ಮಾಡಲಾಯಿತು.

ಇಂಡಸ್ ಕಾಲೇಜು, ಪುತ್ತೂರು ಈ ವಿದ್ಯಾಸಂಸ್ಥೆಯು ಶೈಕ್ಷಣಿಕ ವರ್ಷ 2021-22ನೇ ಸಾಲಿಗೆ BCA, BBA, B.Sc.(Animation & Visual Effect) ಕಾರ್ಯಕ್ರಮಕ್ಕೆ ಹೊಸ ಸಂಯೋಜನೆಗೆ ಅರ್ಜಿ ಸಲ್ಲಿಸಿದ್ದು, ಸದರಿ ಕಾರ್ಯಕ್ರಮಗಳಿಗೆ ಸರಕಾರದಿಂದ ಅನುಮೋದನೆ ದೊರೆಯದ ಕಾರಣ ಸರಕಾರದ ಅನುಮೋದನೆಯನ್ನು ಕಾಯ್ದಿರಿಸಿ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಸಂಯೋಜನೆಗೆ ಶಿಫಾರಸ್ಸು ಮಾಡಲಾಯಿತು.

ಅಲ್ಲದೆ ಶೈಕ್ಷಣಿಕ ವರ್ಷ 2021-22ನೇ ಸಾಲಿಗೆ ವಿಸ್ತರಣಾ ಸಂಯೋಜನೆಗೆ ಅರ್ಜಿ ಸಲ್ಲಿಸಿರುವ ಶ್ರೀರಾಮ ಪ್ರಥಮ ದರ್ಜೆ ಕಾಲೇಜು, ಕಲ್ಲಡ್ಕ ಇಲ್ಲಿನ BCA ಹಾಗೂ ಮಂಗಳೂರು ಅಕಾಡೆಮಿ ಆಫ್ ಪ್ರೊಫೆಶನಲ್ ಸ್ಟಡೀಸ್, ಮಂಗಳೂರು ಇಲ್ಲಿನ BCA, M.Sc.(Audiology) ಮತ್ತು M.Sc.(Speech Language Pathology) ಕಾರ್ಯಕ್ರಮಗಳಿಗೆ ಸರಕಾರದಿಂದ ಅನುಮೋದನೆ ದೊರೆಯದ ಕಾರಣ ಸರಕಾರದ ಅನುಮೋದನೆಯೊಂದಿಗೆ UUCMS ಪೋರ್ಟಲಿನ ಮುಖಾಂತರ ಮುಂದುವರಿಕೆ ಸಂಯೋಜನೆಗೆ ಅರ್ಜಿ ಸಲ್ಲಿಸಿಕೊಂಡ ಪಕ್ಷದಲ್ಲಿ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಸಂಯೋಜನೆಗೆ ಶಿಫಾರಸ್ಸು ಮಾಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ವರ್ಷ 2023-24ನೇ ಸಾಲಿನ ಸಂಯೋಜನೆಗೆ ಸಂಬಂಧಿಸಿ ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆಯನ್ನು ನಡೆಸಿ ಸೀಮಿತ ಅವಧಿಯೊಳಗೆ ಕಾರ್ಯನಿರ್ವಹಿಸಿ ವಿಶ್ವವಿದ್ಯಾನಿಲಯಕ್ಕೆ ವರದಿಯನ್ನು ಸಲ್ಲಿಸಿರುವ ಸಮಿತಿಯ ಅಧ್ಯಕ್ಷರುಗಳಿಗೆ ಮತ್ತು ಸದಸ್ಯರುಗಳಿಗೆ ಕೃತಜ್ಞತೆಯನ್ನು ಸಲ್ಲಿಸಲಾಯಿತು.

ಶೈಕ್ಷಣಿಕ ವರ್ಷ 2023-24ನೇ ಸಾಲಿನ ಸಂಯೋಜನೆಗೆ ಸಂಬಂಧಿಸಿ ಕ್ಲಪ್ತ ಸಮಯದಲ್ಲಿ ಒಳ್ಳೆಯ ರೀತಿಯಲ್ಲಿ ನಡೆದಿರುವುದಕ್ಕೆ ಕಾರ್ಯನಿರ್ವಹಿಸಿದ ಎಲ್ಲಾ ಅಧಿಕಾರಿಗಳಿಗೂ ಮತ್ತು ಸಿಬ್ಬಂದಿಗಳಿಗೂ ಸಭೆಯಲ್ಲಿ ಕೃತಜ್ಞತೆಯನ್ನು ಸಲ್ಲಿಸಲಾಯಿತು.

ಮಾನ್ಯ ಕುಲಸಚಿವರು ಸದಸ್ಯರುಗಳ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಗಳು** |